## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ಅಧಿಕಾರಿಗಳ ನಿವಾಸದ ದೂರವಾಣಿ ವೆಚ್ಚ ಮತ್ತು ಬ್ರಾಡ್‌ಬ್ಯಾಂಡ್ ವೆಚ್ಚವನ್ನು ಮರುಪಾವತಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 110 ಡಿಟಿಎನ್ 2003, ದಿನಾಂಕ: 25-06-2003
2) ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಅಧಿಕಾರಿಗಳ ಸಂಘ, ಇವರ ಪತ್ರ ದಿನಾಂಕ: 26-07-2016

************

**ಪ್ರಸ್ತಾವನೆ:-**

ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ದರ್ಜೆಯ ಅಧಿಕಾರಿಗಳಿಗೆ ನಿವಾಸದ ದೂರವಾಣಿಯ ಮಾಸಿಕ ಗರಿಷ್ಠ ವೆಚ್ಚವಾಗಿ ರೂ.500/-ಗಳನ್ನು ಮರುಪಾವತಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ. ಸರ್ಕಾರದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ದರ್ಜೆ ಆಪ್ತ ಕಾರ್ಯದರ್ಶಿ ಗ್ರೇಡ್-2 ಮತ್ತು ಮುಖ್ಯ ಗ್ರಂಥಾಧಿಕಾರಿ ಅವರ ನಿವಾಸದ ದೂರವಾಣಿ ವೆಚ್ಚವಾಗಿ ಈಗ ನೀಡುತ್ತಿರುವ ರೂ.500/-ಗಳ ಜೊತೆಗೆ ಇನ್ನು ರೂ.250/-ಗಳನ್ನು ಸೇರಿಸಿ ಮಾಸಿಕ ನಿವಾಸದ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್ ಮಾಸಿಕ ಗರಿಷ್ಠ ವೆಚ್ಚವಾಗಿ ರೂ.750/-ಗಳನ್ನು ಮರುಪಾವತಿಸಲು ಸೂಕ್ತ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಸಚಿವಾಲಯ ಅಧಿಕಾರಿಗಳ ಸಂಘ, ಇವರು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 181 ಡಿಟಿಎನ್ 2016, ಬೆಂಗಳೂರು,**
**ದಿನಾಂಕ: 16-01-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ನಿವಾಸದ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚವನ್ನು ರೂ.500/-ರಿಂದ ರೂ.750/-ಕ್ಕೆ ಹೆಚ್ಚಿಸಿ ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಮರುಪಾವತಿಸಲು ಸರ್ಕಾರ ಮಂಜೂರಾತಿ ನೀಡಿದೆ.

------2

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "2052-00-090-0-01-052" (ಯೋಜನೇತರ) ದೂರವಾಣಿ ವೆಚ್ಚಗಳು ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 901 ವೆಚ್ಚ-12/2016, ದಿನಾಂಕ: 20.12.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಎಂ. ರಾಘವೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಕಾರ್ಯಕಾರಿ)

**ಗೆ:**

1) ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ)/(ಜಿ ಮತ್ತು ಎಸ್‌ಎಸ್‌ಎ) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
3) ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿಗಳು/ಜಂಟಿ ಕಾರ್ಯದರ್ಶಿಗಳು/ಉಪ ಕಾರ್ಯದರ್ಶಿಗಳು/ ಪಿ.ಎಸ್.ಗ್ರೇಡ್-1 (ಉಪ ಕಾರ್ಯದರ್ಶಿ ದರ್ಜೆ) /ಸಚಿವರ ಆಪ್ತ ಕಾರ್ಯದರ್ಶಿಗಳು
4) ಸರ್ಕಾರದ ಎಲ್ಲಾ ಅಧೀನ ಕಾರ್ಯದರ್ಶಿಗಳು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳು/ಆಪ್ತ ಕಾರ್ಯದರ್ಶಿ(ಗ್ರೇಡ್-2)/ಮುಖ್ಯ ಗ್ರಂಥಾಧಿಕಾರಿ/ಪ್ರಾರೂಪಣಕಾರ ಮತ್ತು ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
5) ಅಧೀನ ಕಾರ್ಯದರ್ಶಿ (ವೆಚ್ಚ-12) ಆರ್ಥಿಕ ಇಲಾಖೆ
6) ಖಜಾನಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
7) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
8) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
9) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ
10) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
11) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
12) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (ಲೆಕ್ಕಪತ್ರ-1, 2 ಮತ್ತು 3)
13) ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ
14) ಕಛೇರಿ ಪ್ರತಿ/ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು